ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ಬಗ್ಗೆ

ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ):-

632(687) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ರಾಜ್ಯದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶಿಕ್ಷಕರು/ಉಪನ್ಯಾಸಕರು ಮತ್ತು ಬೋಧಕೇತರ ಸಂಖ್ಯೆ ಎಷ್ಟು;

(ಆ) ಕೋವಿಡ್-19 ರ ಸಂದರ್ಭದಲ್ಲಿ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳ ಶಿಕ್ಷಕರು, ನೌಕರರು ಬಹಳಷ್ಟು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಶಿಕ್ಷಕರ ಸಂಕಷ್ಟದಿಂದ ಶೈಕ್ಷಣಿಕ ಚಟುವಟಿಕೆಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ಸಂಸ್ಥೆಗಳ ಶಿಕ್ಷಕರು ಮತ್ತು ನೌಕರರಿಗೆ ಸರ್ಕಾರಕ್ಕೆ ಯಾವುದಾದರೂ ವಿಶೇಷ ಪ್ಯಾಕೇಜ್ ನೀಡುವ ಚಿಂತನೆ ಇದೆಯೇ? (ಮಾಹಿತಿ ನೀಡುವುದು)